ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 10–10–2019

## ಪತ್ರಿಕಾ ಪ್ರಕಟಣೆ

### ಕಾರ್ಯಸೂಚಿಯಂತೆ ಸದನದ ಕಲಾಪಕ್ಕೆ ಅವಕಾಶ ಕಲ್ಪಿಸಿ ಪ್ರತಿಪಕ್ಷಗಳ ಕೆಂಗಣ್ಣಿಗೆ ಗುರಿಯಾದ ಸಭಾಧ್ಯಕ್ಷರು

ಬೆಂಗಳೂರು, ಅಕ್ಟೋಬರ್ 10 (ಕರ್ನಾಟಕ ವಾರ್ತೆ ) :

ಒಂದೆಡೆ ಬರ ಮತ್ತು ಮತ್ತೊಂದೆಡೆ ನೆರೆಯ ಸಮಸ್ಯೆಗೆ ತುತ್ತಾಗಿ ಅರ್ಧ ರಾಜ್ಯವೇ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಈ ಕುರಿತು ತಾವು ನೀಡಿರುವ ನಿಲುವಳಿ ಸೂಚನೆಗೆ ಸಂಬಂಧಿಸಿದಂತೆ ಪ್ರಾಥಮಿಕ ಚರ್ಚೆಗೆ ಅವಕಾಶ ಮಾಡಿಕೊಡುವಂತೆ ಕಾಂಗ್ರೆಸ್ ಮುಖಂಡ ಸಿದ್ದರಾಮಯ್ಯ ಅವರ ನೇತೃತ್ವದ ಪ್ರತಿಪಕ್ಷದ ಒತ್ತಾಯಕ್ಕೆ ಮಣಿಯದೆ ಕಾರ್ಯಸೂಚಿಯಂತೆ ಸದನದ ಕಲಾಪಕ್ಕೆ ಅವಕಾಶ ಕಲ್ಪಿಸಿದ ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಇಲ್ಲಿ ಇಂದು ಪ್ರತಿಪಕ್ಷಗಳ ಕೆಂಗಣ್ಣಿಗೆ ಗುರಿಯಾದರು.

ಸಂತಾಪ ಸೂಚನಾ ನಿರ್ಣಯ ಪೂರ್ಣಗೊಂಡ ನಂತರ ಕಾರ್ಯದರ್ಶಿಗಳ ವರದಿ ಹಾಗೂ ವಿವಿಧ ಸಮಿತಿಗಳ ವರದಿ ಮಂಡನೆಯ ನಂತರ ಕಾಂಗ್ರೆಸ್ ಹಾಗೂ ಜಾತ್ಯಾತೀತ ಜನತಾ ದಳ ನೀಡಿರುವ ನಿಲುವಳಿ ಸೂಚನೆಯನ್ನು ಕೈಗೆತ್ತಿಕೊಳ್ಳುವುದಾಗಿ ಸಭಾಧ್ಯಕ್ಷರು ಹೇಳಿದರಾದರೂ, ಪ್ರಶ್ನೋತ್ತರ ವೇಳೆ ಹಾಗೂ ಶೂನ್ಯ ವೇಳೆಯ ನಂತರ ನಿಯಮ 60 ರಂತೆ ಸಾರ್ವಜನಿಕ ಮಹತ್ವದ ವಿಚಾರದ ಚರ್ಚೆಗೆ ನಿಯಮಾವಳಿಗಳಲ್ಲಿ ಅವಕಾಶವಿದೆ ಎಂಬುದನ್ನು ಉಲ್ಲೇಖಿಸಿದ ಸಿದ್ದರಾಮಯ್ಯ ಅವರು ದಿನದ ಕಾರ್ಯಸೂಚಿಯಲ್ಲಿ ಪ್ರಶ್ನೋತ್ತರ ವೇಳೆ ಹಾಗೂ ಶೂನ್ಯ ವೇಳೆಯ ಚರ್ಚೆ ಇಲ್ಲದಿರುವ ಹಿನ್ನೆಲೆಯಲ್ಲಿ ಸಭಾಧ್ಯಕ್ಷ ಪೀಠಕ್ಕೆ ತಾವು ಸಲ್ಲಿಸಿದ ನಿಲುವಳಿ ಸೂಚನೆ ಕುರಿತ ಪ್ರಾಥಮಿಕ ಚರ್ಚೆಗೆ ಪಟ್ಟುಹಿಡಿದರು. ಸಭಾನಾಯಕ ಬಿ ಎಸ್ ಯಡಿಯೂರಪ್ಪ ಅವರು ಮಧ್ಯ ಪ್ರವೇಶಿಸಿ ಚರ್ಚೆಗೆ ತಾವು ಸಿದ್ಧ ಎಂದು ಭರವಸೆ ನೀಡಿದರೂ ಪ್ರತಿಪಕ್ಷದವರು ಮುಖ್ಯಮಂತ್ರಿಯವರ ಮನವಿಯನ್ನು ಪುರಸ್ಕರಿಸಲಿಲ್ಲ.

ತಮ್ಮ ಪಕ್ಷದ ನಾಯಕ ಸಿದ್ದರಾಮಯ್ಯ ಅವರ ಬೆಂಬಲಕ್ಕೆ ನಿಂತ ಸದಸ್ಯರಾದ ಕೆ ಆರ್ ರಮೇಶ್ ಕುಮಾರ್ ಕೃಷ್ಣ ಬೈರೇಗೌಡ ಹಾಗೂ ಹೆಚ್ ಕೆ ಪಾಟೀಲ್ ಅವರು ಕಲಾಪದ ಕಾರ್ಯವಿಧಾನದಲ್ಲಿನ ನಿಯಮಾವಳಿಗಳನ್ನು ಉಲ್ಲೇಖಿಸಿದರೂ ಸಭಾಧ್ಯಕ್ಷರ ಮನವೊಲಿಸಲು ಸಾಧ್ಯವಾಗಲಿಲ್ಲ. ಒಂದು ಹಂತದಲ್ಲಿ ಸಿದ್ದರಾಮಯ್ಯ ಅವರು ಪ್ರಜಾಪ್ರಭುತ್ವದ ಧ್ವನಿ ಅಡಗಿಸಲು ಸಾಧ್ಯವಿಲ್ಲ ಎಂದು ಏರಿದ ಧ್ವನಿಯಲ್ಲಿ ಕೂಗಿ ಸಭಾಧ್ಯಕ್ಷರ ನಡೆಯನ್ನು ಪ್ರತಿಭಟಿಸಿದರಲ್ಲದೆ, ಸಭಾಧ್ಯಕ್ಷರು ಸರ್ಕಾರದ ಜೊತೆಗೆ ಶಾಮೀಲಾಗಿದ್ದಾರೆ ಎಂದು ಆರೋಪಿಸಿದರು. ಇದಾವುದಕ್ಕೂ ಜಗ್ಗದ ಸಭಾಧ್ಯಕ್ಷರು ಕಾರ್ಯಸೂಚಿಯಂತೆ ಕಲಾಪವನ್ನು ಮುಂದುವರೆಸಿದರು.

ರಾಜ್ಯ ವಿಧಾನ ಸಭೆಯ ಕಾರ್ಯದರ್ಶಿ ಎಂ ಕೆ ವಿಶಾಲಾಕ್ಷಿ ಅವರು ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ – ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸಿದರು. ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ ಅಧ್ಯಕ್ಷ ಅರಗ ಜ್ಞಾನೇಂದ್ರ ಅವರು 2018–19 ನೇ ಸಾಲಿನ ಸಮಿತಿಯ 28 ನೇ ವರದಿಯನ್ನು ಒಪ್ಪಿಸಿದರು. ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷ ಎಸ್ ಅಂಗಾರ ಅವರು ಸಮಿತಿಯ ಎರಡನೇ ವರದಿಯನ್ನು ಸದನಕ್ಕೆ ಒಪ್ಪಿಸಿದರು.

ನಂತರ, ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರು ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ 2017–18 ನೇ ಸಾಲಿನ ಧನ ವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು ಸಭೆಯ ಮುಂದಿಟ್ಟರು. ಅಲ್ಲದೆ, ಮಾರ್ಚ್ 2018 ಕ್ಕೆ ಅಂತ್ಯಗೊಂಡ ರಾಜಸ್ವ ವಲಯದ ಮೇಲಿನ ವರದಿ ಹಾಗೂ ಆರ್ಥಿಗ ವಲಯದ ಮೇಲಿನ ವರದಿಗಳನ್ನು ಸಭೆಯ ಮುಂದಿಟ್ಟರು. ತದನಂತರ, ಉಪ ಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ, ಡಾ ಸಿ ಎನ್ ಅಶ್ವಥನಾರಾಯಣ ಹಾಗೂ ಲಕ್ಷ್ಮಣ ಸವದಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ ಸಿ ಮಾಧುಸ್ವಾಮಿ ಅವರನ್ನು ಒಳಗೊಂಡಂತೆ ಬಿ ಎಸ್ ಯಡಿಯೂರಪ್ಪ ಅವರ ಸಚಿವ ಸಂಪುಟ ಸಹೋದ್ಯೋಗಿಗಳು ತಮ್ಮ ಇಲಾಖೆಗೆ ಸಂಬಂಧಿಸಿದಂತೆ ವಿತ್ತೀಯ ಕಾರ್ಯಕಲಾಪಗಳಲ್ಲಿನ ಪ್ರಸಕ್ತ ಸಾಲಿನ ಅನುದಾನದ ಬೇಡಿಕೆಗಳನ್ನು ಮಂಡಿಸಿದರು.

ಇದೇ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರನ್ನು ಪ್ರತಿಪಕ್ಷ ನಾಯಕರಾಗಿ ಹಾಗೂ ಸರ್ಕಾರದ ಸಚೇತಕರಾಗಿ ವಿ ಸುನೀಲ್ ಕುಮಾರ್ ಅವರನ್ನು ಮಾನ್ಯ ಮಾಡಿರುವುದಾಗಿ ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅಧಿಕೃತವಾಗಿ ಪ್ರಕಟಿಸಿದರು.

ಅಂತೆಯೇ, ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಆಡಳಿತಾರೂಢಾ ಹಾಗೂ ಪ್ರತಿಪಕ್ಷಗಳ ಸದನ ನಾಯಕರನ್ನು ಕಲಾಪ ಸಲಹಾ ಸಮಿತಿಯ ಸಭೆಗೆ ಆಮಂತ್ರಿಸಿದ ಸಭಾಧ್ಯಕ್ಷರು ಪ್ರತಿಪಕ್ಷ ಹಾಗೂ ಆಡಳಿತ ಪಕ್ಷಗಳ ಘೋಷಣೆ ಮತ್ತು ಪ್ರತಿ–ಘೋಷಣೆಗಳ ನಡುವೆಯೇ ಸದನವನ್ನು ಭೋಜನ ವಿರಾಮಕ್ಕೆ ಮುಂದೂಡಿದರು.

********

ಡಿ ಪಿ ಎಂ

## ವಿಧಾನ ಮಂಡಲದ ಕಾರ್ಯಕಲಾಪಗಳು :

## ರಾಜಸ್ವ ವಲಯದ ವರದಿ ಸಂಪುಟದಲ್ಲಿ ಮಂಡನೆ

**ಬೆಂಗಳೂರು, ಅಕ್ಟೋಬರ್ 10, (ಕರ್ನಾಟಕ ವಾರ್ತೆ)**

ವಿಧಾನ ಪರಿಷತ್ತಿನಲ್ಲಿ ಇಂದು ಸಂವಿಧಾನ 151 (2) ನೇ ಅನುಚ್ಛೇಧದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು 31ನೇ ಮಾರ್ಚ್ 2018 ಕೊನೆಗೊಂಡ ವರ್ಷಕ್ಕೆ ನೀಡಿರುವ ರಾಜಸ್ವ ವಲಯದ ವರದಿ (ಸಂಖ್ಯೆ 1) ಅನ್ನು ಸಭೆಯಲ್ಲಿ ಮಂಡಿಸಲಾಯಿತು. ಅಲ್ಲದೆ, 2018 ಕ್ಕೆ ಕೊನೆಗೊಂಡ ಆರ್ಥಿಕ ವಲಯದ ವರದಿ (ಸಂಖ್ಯೆ– 3) ಅನ್ನು ಮಂಡಿಸಲಾಯಿತು.

ಭಾರತ ಸಂವಿಧಾನದ 205 (1) (ಎ) ನೇ ಅನುಚ್ಛೇಧದ ಮೇರೆಗೆ 2017–18 ನೇ ಸಾಲಿನ ಧನ ವಿನಿಯೋಗ ಹಾಗೂ ಹಣಕಾಸು ಲೆಕ್ಕಗಳು (ಸಂಪುಟ 1 ಮತ್ತು 2 ಅನ್ನು) ಸಭೆಗೆ ಒಪ್ಪಿಸಲಾಯಿತು.

ಆರ್. ಧರ್ಮಸೇನ್, ಸದಸ್ಯರು ಅನುಸೂಚಿತ ಜಾತಿ ಮತ್ತು ಪಂಗಡಗಳ ಕಲ್ಯಾಣ ಸಮಿತಿ ಇವರು ಸಮಿತಿಯ 2018–19 ನೇ ಸಾಲಿನ ಎರಡನೇ ವರದಿಯನ್ನು ಒಪ್ಪಿಸಿದರು.

ವಿಧಾನ ಪರಿಷತ್ ಸದಸ್ಯರಾದ ಎಸ್. ಆರ್. ಪಾಟೀಲ್ ಅವರು ನೆರೆಹಾವಳಿಯಿಂದ ಮನೆ ಕಳೆದುಕೊಂಡವರಿಗೆ ಪರಿಹಾರವನ್ನು ನೀಡುವ ವಿಷಯ ಪ್ರಸ್ತಾಪಿಸಿದಾಗ ಉತ್ತರಿಸಿದ ಕಂದಾಯ ಸಚಿವ ಆರ್. ಆಶೋಕ್ 118 ವರ್ಷಗಳಲ್ಲಿ ಕಂಡರಿಯದ ಪ್ರವಾಹ ರಾಜ್ಯದಲ್ಲಿ ಕಂಡುಬಂದಿದೆ. ಮಹಾರಾಷ್ಟ್ರದಿಂದ 6 ಲಕ್ಷ ಕ್ಯೂಸೆಕ್ ನೀರು ಬಂದಿದ್ದು ಆಲಮಟ್ಟಿಯಂದ ಹರಿದು ಮತ್ತಷ್ಟು ಹಾನಿಯಾಗಿದೆ. 7 ಲಕ್ಷ ಜನರನ್ನು ನೆರೆಹಾವಳಿಯಿಂದ ರಕ್ಷಿಸಲಾಗಿದೆ. ಒಟ್ಟು 42 ಅಗ್ನಿಶಾಮಕ, ಇತರ ತಂಡಗಳು ಹಾಗೂ ನಾಲ್ಕು ಹೆಲಿಕಾಪ್ಟರ್‌ಗಳು ರಕ್ಷಣಾ ಕಾರ್ಯಕ್ಕೆ ತೊಡಗಿದ್ದವು. 22 ಜಿಲ್ಲೆಗಳ 103 ತಾಲ್ಲೂಕುಗಳು ನೆರೆ ಪ್ರವಾಹಕ್ಕೆ ಸಿಲುಕಿದ್ದು ಸರ್ಕಾರ 2949 ಕೋಟಿ ಪರಿಹಾರ ಬಿಡುಗಡೆ ಮಾಡಿದೆ. ನೆರೆಯಲ್ಲಿ 1,20,406 ಮನೆಗಳು ಹಾನಿಯಾಗಿದ್ದು, 42,293 ಮನೆಗಳಿಗೆ ತಲಾ 5 ಲಕ್ಷ ರೂ. ಪರಿಹಾರವನ್ನು ಹಾಗೂ ಸ್ವಲ್ಪ ಹಾನಿಗೊಳಗಾದ 77,513 ಮನೆಗಳಿಗೆ ತಲಾ 50,000 ರೂ ಪರಿಹಾರವನ್ನು ಸರ್ಕಾರ ನೀಡುತ್ತಿದ್ದು, ಒಂದು ವೇಳೆ ಮನೆಗೆ ನೀರು ನುಗ್ಗಿದ ಪಕ್ಷದಲ್ಲೂ ಅಂತಹ ಮನೆಗಳಿಗೆ 10,000 ರೂ. ಪರಿಹಾರ ನೀಡಲಾಗುವುದು ಎಂದು ಸಚಿವರು ಸದಸ್ಯರ ಪ್ರಶ್ನೆಗೆ ಉತ್ತರಿಸಿದರು.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಅಕ್ಟೋಬರ್ 10 (ಕರ್ನಾಟಕ ವಾರ್ತೆ) :**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 13–10–2019 ರ ಭಾನುವಾರದಂದು ಶ್ರೀ

ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶ್ರೀ ಜಯಂತ್ ದ್ವಾರಕನಾಥ್ ಮತ್ತು ಕುಮಾರಿ ಪ್ರಣತಿ. ಪಿ. ಕಟ್ಟೆ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಬಾಲಭವನ ಸೊಸೈಟಿ ಸಹಯೋಗದೊಂದಿಗೆ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಕು. ಶ್ರೇಯಾ ವಿ ಮೂರ್ತಿ ರವರಿಂದ ಹಿಂದೂಸ್ತಾನಿ ಗಾಯನ ಹಾಗೂ ಕು. ಶಾರ್ವರಿ ಸೋಮಯಾಜಿ ರವರಿಂದ ಹರಿಕಥೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.